☎ Ph : 2768 3377

# ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ

ನಂ. 333/1, ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.

ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.in

## ತಾತ್ಕಾಲಿಕ ವಸತಿ ವಿನ್ಯಾಸ ಅನುಮೋದನೆ

(ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ (ತಿದ್ದುಪಡಿ) ಕಾಯ್ದೆ, 2015ರ ಕಲಂ 17(2ಎ)ರಡಿಯಲ್ಲಿ)

ವಿಷಯ : ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲ್ಲೂಕು, ವಿಜಯಪುರ ಹೋಬಳಿ, ಬುಡನ್‌ಪಡಿಯಾ ಗ್ರಾಮದ ಸ.ನಂ 10 ರಲ್ಲಿ (4ಎ-01ಗು) ಮತ್ತು 12/3 ರಲ್ಲಿ (1ಎ-06.08ಗು) ಒಟ್ಟು 5ಎ-07.08ಗು ಅಥವಾ 20992.77 ಚ.ಮೀ ವಿಸ್ತೀರ್ಣದ ಪ್ರದೇಶದಲ್ಲಿ 'ವಸತಿ' ವಿನ್ಯಾಸಕ್ಕೆ ತಾತ್ಕಾಲಿಕ ಅನುಮೋದನೆ ನೀಡುವ ಬಗ್ಗೆ.

ಉಲ್ಲೇಖ: 1) ವಿನ್ಯಾಸ ಅನುಮೋದನೆ ಕೋರಿ ಸಲ್ಲಿಸಿರುವ ಅರ್ಜಿ ಸಂಖ್ಯೆ 3547 ದಿನಾಂಕ: 20-02-2018 ಮತ್ತು ಮನವಿ ಪತ್ರ ದಿನಾಂಕ: 14-12-2018

2) ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ: ಎಎಲ್‌ಎನ್(ದೇ.ವಿ)ಸಿಆರ್/05/2017-18 ದಿನಾಂಕ: 11-10-2017 [ಸ.ನಂ. 12/3 ರಲ್ಲಿ 1ಎ-06.08ಗು] ಮತ್ತು ಎಎಲ್‌ಎನ್(ದೇ.ವಿ)ಸಿಆರ್/34/2017-18 ದಿನಾಂಕ: 08-02-2018 [ಸ.ನಂ. 10 ರಲ್ಲಿ 4ಎ-01ಗು)]

3) ದಿನಾಂಕ: 18-12-2018 ರಂದು ನಡೆದ ಪ್ರಾಧಿಕಾರದ 123 ನೇ ಸಭೆಯ ವಿಷಯ ಸಂಖ್ಯೆ: 123 [4(4)] ರಲ್ಲಿ ಕೈಗೊಂಡ ನಿರ್ಣಯ

4) ಈ ಪ್ರಾಧಿಕಾರದ ಸಮ ಸಂಖ್ಯೆ ಪತ್ರ ದಿನಾಂಕ: 02-01-2019

5) ಅರ್ಜಿದಾರರ ಮನವಿ ಪತ್ರ ದಿನಾಂಕ: 01-03-2019

6) ಪ್ರಾಧಿಕಾರಕ್ಕೆ ಶುಲ್ಕಗಳನ್ನು ಪಾವತಿಸಿದ ರಶೀದಿ ಸಂಖ್ಯೆ: 9436 ರಲ್ಲಿ ರೂ.9,60,000/- (ಒಂಭತ್ತು ಲಕ್ಷದ ಅರವತ್ತು ಸಾವಿರ ರೂಪಾಯಿಗಳು ಮಾತ್ರ/-) ದಿನಾಂಕ: 07-03-2019

********

**ಪ್ರಸ್ತಾವನೆ :-**

ಶ್ರೀ ಎಂ.ವಿ.ಸೂರ್ಯನಾರಾಯಣ ರೆಡ್ಡಿ ಬಿನ್ ಲೇ॥ ವೆಂಕಟರೆಡ್ಡಿ ಮತ್ತು ಶ್ರೀ ಗೋಪಿನಾಥ್.ಎಲ್ ಬಿನ್ ಲೇ॥ ಲಕ್ಷ್ಮೀನಾರಾಯಣಪ್ಪ ರವರುಗಳ ಪರವಾಗಿ ನೋಂದಾಯಿತ ಜಿಪಿಎದಾರರಾದ ಶ್ರೀ ಶ್ರೀನಿವಾಸ.ವಿ. ಬಿನ್ ವೆಂಕಟರಮಣಪ್ಪ ಇವರು ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲ್ಲೂಕು, ವಿಜಯಪುರ ಹೋಬಳಿ, ಬುಡನ್‌ಪಡಿಯಾ ಗ್ರಾಮದ ಸ.ನಂ 10 ರಲ್ಲಿ (4ಎ-01ಗು) ಮತ್ತು 12/3 ರಲ್ಲಿ (1ಎ-06.08ಗು) *ಒಟ್ಟು 5ಎ-07.08ಗು ಅಥವಾ 20992.77 ಚ.ಮೀ* ವಿಸ್ತೀರ್ಣದ ಪ್ರದೇಶದಲ್ಲಿ 'ವಸತಿ' ವಿನ್ಯಾಸ ನಕ್ಷೆಗೆ ಅನುಮೋದನೆ ಕೋರಿ ಉಲ್ಲೇಖ (1) ರಲ್ಲಿ ಮನವಿ ಸಲ್ಲಿಸಿರುತ್ತಾರೆ.

ಪರಿಶೀಲಿಸಲಾಗಿ, ಸರ್ಕಾರದಿಂದ ಅನುಮೋದನೆಯಾಗಿರುವ ಮಹಾಯೋಜನೆಯಲ್ಲಿ ಪ್ರಸ್ತಾಪಿತ ಜಮೀನುಗಳನ್ನು **'ವಸತಿ ವಲಯ ಮತ್ತು ಭಾಗಶಃ ಪ್ರಸ್ತಾಪಿತ ರಸ್ತೆ'** ಉದ್ದೇಶಕ್ಕಾಗಿ ಕಾಯ್ದಿರಿಸಲಾಗಿದೆ. ಉಲ್ಲೇಖ (2) ರನ್ವಯ ಪ್ರಸ್ತಾಪಿತ ಜಮೀನುಗಳನ್ನು **'ವಸತಿ'** ಉದ್ದೇಶಕ್ಕಾಗಿ ಭೂ ಪರಿವರ್ತನೆ ಮಾಡುವ ಸಂಬಂಧ ಆದೇಶವನ್ನು ಹೊರಡಿಸಲಾಗಿರುತ್ತದೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 24 ಶಾಸನ 2015 ದಿನಾಂಕ: 10-09-2015 ರನ್ವಯ ಕೆ.ಟಿ.ಸಿ.ಪಿ. ಕಾಯ್ದೆ 1961 ರ ಕಲಂ 17(2) ರನ್ವಯ ಸದರಿ ವಸತಿ ವಿನ್ಯಾಸಕ್ಕೆ ತಾತ್ಕಾಲಿಕ ಅನುಮೋದನೆ ನೀಡುವ ಬಗ್ಗೆ ಉಲ್ಲೇಖ (3) ರ ಪ್ರಾಧಿಕಾರದ ಸಭೆಯಲ್ಲಿ ಮಂಡಿಸಲಾಗಿದ್ದು, ಸಭೆಯ ನಿರ್ಣಯದಂತೆ ತಾತ್ಕಾಲಿಕ ವಸತಿ ವಿನ್ಯಾಸ ನಕ್ಷೆಗೆ ಅನುಮೋದನೆ ನೀಡಲು ತೀರ್ಮಾನಿಸಲಾಗಿದೆ.

ಪ್ರಾಧಿಕಾರದ ತೀರ್ಮಾನದಂತೆ ಅರ್ಜಿದಾರರಿಗೆ ಶುಲ್ಕ ಪಾವತಿಸುವಂತೆ ಹಾಗೂ ಅಗತ್ಯ ದಾಖಲೆಗಳನ್ನು ಸಲ್ಲಿಸುವಂತೆ ಉಲ್ಲೇಖ (4) ರಲ್ಲಿ ತಿಳಿಸಲಾಗಿತ್ತು. ಅದರಂತೆ ಉಲ್ಲೇಖ (5) ರಲ್ಲಿ ಅರ್ಜಿದಾರರು ಅಗತ್ಯ ದಾಖಲೆಗಳನ್ನು ಪ್ರಾಧಿಕಾರಕ್ಕೆ ಸಲ್ಲಿಸಿರುತ್ತಾರೆ. ಹಾಗೂ ಉಲ್ಲೇಖ (6) ರಂತೆ ನಿಗಧಿತ ಶುಲ್ಕಗಳನ್ನು ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ.

ಹಾಗಾಗಿ ಮೇಲ್ಕಂಡ ಅಂಶಗಳನ್ವಯ, ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ/157/ಬಿಎಂಆರ್/2005 ದಿನಾಂಕ: 27-01-2009 ಮತ್ತು ತಿದ್ದುಪಡಿ ಆದೇಶ ದಿನಾಂಕ: 29-01-2009 ರಲ್ಲಿ ಪ್ರಾಧಿಕಾರದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಮಹಾಯೋಜನೆಯು ಅನುಮೋದನೆಗೊಂಡಿದ್ದು, ಸದರಿ ಮಹಾಯೋಜನೆಯ ವಲಯ ನಿಯಮಾವಳಿಗಳನ್ವಯ ಹಾಗೂ ಪ್ರಾಧಿಕಾರದ ಸಭೆಯ ನಿರ್ಣಯದನ್ವಯ ಮತ್ತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 2015 ರ ಕಲಂ 17 (2) ರಡಿಯಲ್ಲಿ ಸದರಿ ವಸತಿ ವಿನ್ಯಾಸ ನಕ್ಷೆಗೆ ಈ ಕೆಳಕಂಡಂತೆ ತಾತ್ಕಾಲಿಕ ಅನುಮೋದನೆ ನೀಡಿ ಆದೇಶಿಸಲಾಗಿದೆ.

**ಆದೇಶ ಸಂಖ್ಯೆ: ಬಿಐಎಪಿಎ/ಟಿಪಿ03/ಎಲ್ಎಒ/49/2017-18/2444 ದಿನಾಂಕ 11 MAR 2019** 14

ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲ್ಲೂಕು, ವಿಜಯಪುರ ಹೋಬಳಿ, ಬುಡನ್‌ಪಡಿಯಾ ಗ್ರಾಮದ ಸ.ನಂ 10 ರಲ್ಲಿ (4ಎ-01ಗು) ಮತ್ತು 12/3 ರಲ್ಲಿ (1ಎ-06.08ಗು) ***ಒಟ್ಟು 5ಎ-07.08ಗು ಅಥವಾ 20992.77 ಚ.ಮೀ*** ವಿಸ್ತೀರ್ಣದ ಪ್ರದೇಶಕ್ಕೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ (ತಿದ್ದುಪಡಿ) ಕಾಯ್ದೆ 2015ರ ಕಲಂ 17(2) ರನ್ವಯ ವಿನ್ಯಾಸ ನಕ್ಷೆಯನ್ನು ಭೌತಿಕವಾಗಿ ಜಮೀನಿನ ಮೇಲೆ ಅಳವಡಿಸಿ ಅಭಿವೃದ್ಧಿಪಡಿಸಲು ಮಾತ್ರ ಈ ಕೆಳಕಂಡ ನಿಬಂಧನೆಗಳಿಗೆ ಒಳಪಡಿಸಿ, ವಸತಿ ವಿನ್ಯಾಸ ನಕ್ಷೆಗೆ **"ತಾತ್ಕಾಲಿಕ ಅನುಮೋದನೆ"** ನೀಡಲಾಗಿದೆ.

1. ಈ ವಿನ್ಯಾಸವನ್ನು ಅಭಿವೃದ್ಧಿಪಡಿಸಲು ಮಾತ್ರ ಅನುಮೋದನೆ ನೀಡಲಾಗಿದೆ.
2. ಈಗ ನೀಡಿರುವ ವಿನ್ಯಾಸ ಮಂಜೂರಾತಿಯ ಅವಧಿಯು ಮಂಜೂರಾತಿ ನೀಡಿದ ದಿನಾಂಕದಿಂದ ಎರಡು (02) ವರ್ಷಗಳವರೆಗೆ ಮಾತ್ರ ಜಾರಿಯಲ್ಲಿರುತ್ತದೆ. ಈ ಅವಧಿಯಲ್ಲಿ ವಿನ್ಯಾಸದ ಅಭಿವೃದ್ಧಿ ಕಾರ್ಯ ಪೂರ್ಣಗೊಳ್ಳದಿದ್ದಲ್ಲಿ ವಿನ್ಯಾಸದ ತಾತ್ಕಾಲಿಕ ಅನುಮತಿಯನ್ನು ಕನಿಷ್ಠ ಮೂರು (03) ತಿಂಗಳು ಮೊದಲೇ ನವೀಕರಿಸಿಕೊಳ್ಳತಕ್ಕದ್ದು.

☎ Ph : 2768 3377

**ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ**

ನಂ. 333/1, ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.

ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.in

3. ವಸತಿ ವಿನ್ಯಾಸದಲ್ಲಿನ ಎಲ್ಲಾ ಸಿವಿಲ್ ಕಾಮಗಾರಿಗಳಾದ ರಸ್ತೆ, ಚರಂಡಿ, ಒಳಚರಂಡಿ, ನೀರಿನ ಸಂಪರ್ಕ ಹಾಗೂ ಇತರೆ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ಲೋಕೋಪಯೋಗಿ ಒಳನಾಡು ಬಂದರು ಮತ್ತು ಜಲಸಾರಿಗೆ ಇಲಾಖೆ, ತೋಟಗಾರಿಕೆ ಇಲಾಖೆ, ಬೆಸ್ಕಾಂ ಮತ್ತು ಸ್ಥಳೀಯ ಸಂಸ್ಥೆಯಿಂದ ದೃಢೀಕರಣ ಪತ್ರಗಳನ್ನು ಪಡೆದು ಸಲ್ಲಿಸಿದ ನಂತರ ವಿನ್ಯಾಸ ನಕ್ಷೆಗೆ ಅಂತಿಮ ಅನುಮೋದನೆ ನೀಡಿ, ಶೇ. 100ರಷ್ಟು ನಿವೇಶನಗಳನ್ನು ಬಿಡುಗಡೆ ಮಾಡಲು ಕ್ರಮ ಜರುಗಿಸಲಾಗುವುದು. ಅಲ್ಲಿಯವರೆಗೆ ವಿನ್ಯಾಸದಲ್ಲಿನ ಯಾವುದೇ ನಿವೇಶನಗಳನ್ನು ಪರಭಾರೆ ಮಾಡತಕ್ಕದ್ದಲ್ಲ.

4. ಈ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ವಿನ್ಯಾಸದಲ್ಲಿ ಯಾವುದೇ ಬದಲಾವಣೆಯನ್ನು ಮಾಡಬಾರದು ಹಾಗೂ ಅನುಮೋದನೆ ನೀಡಲಾದ ನಿರ್ದಿಷ್ಟ ಬಳಕೆಗೆ ಮಾತ್ರ ಅಭಿವೃದ್ಧಿಪಡಿಸತಕ್ಕದ್ದು. ಬದಲಾವಣೆ ಪ್ರಸ್ತಾಪಿಸಿದಲ್ಲಿ ಚಾಲ್ತಿಯಲ್ಲಿರುವ ಶುಲ್ಕ ಹಾಗೂ ನಿಯಮಗಳು ಅನ್ವಯವಾಗುತ್ತವೆ.

5. ವಿನ್ಯಾಸದಲ್ಲಿ ಕಾಯ್ದಿರಿಸಿರುವ ಉದ್ಯಾನವನ ಪ್ರದೇಶಕ್ಕೆ Chain Link Fencing ಅಳವಡಿಸಿ ಉದ್ಯಾನವನವನ್ನು ಅಭಿವೃದ್ಧಿಪಡಿಸಿ ತೋಟಗಾರಿಕೆ ಇಲಾಖೆಯಿಂದ ದೃಢೀಕರಣ ಪತ್ರ ಸಲ್ಲಿಸತಕ್ಕದ್ದು. ಸದರಿ ವಸತಿ ವಿನ್ಯಾಸಕ್ಕೆ ಅಂತಿಮ ಅನುಮೋದನೆ ಪಡೆಯುವ ಪೂರ್ವದಲ್ಲಿ ಉದ್ಯಾನವನ ಮತ್ತು ರಸ್ತೆ ಪ್ರದೇಶಗಳನ್ನು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಯಾದ ವಿಜಯಪುರ ಪುರಸಭೆಗೆ ನೋಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಹಸ್ತಾಂತರಿಸತಕ್ಕದ್ದು.

6. ಪ್ರಸ್ತಾವಿತ ಬಡಾವಣೆಯಲ್ಲಿನ ನಿವೇಶನದಾರರಿಗೆ ನೀರು ಸರಬರಾಜು, STP/ಸೆಪ್ಟಿಕ್ ಟ್ಯಾಂಕ್ ಮುಂತಾದ ಮೂಲಭೂತ ಸೌಕರ್ಯಗಳನ್ನು ಬಡಾವಣೆಯ ಮಾಲೀಕರು ಒದಗಿಸತಕ್ಕದ್ದು.

7. ವಿನ್ಯಾಸ ಪ್ರದೇಶದಲ್ಲಿ ಹಾಲಿ ಇರುವ ಗಿಡ-ಮರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಉಳಿಸಿಕೊಳ್ಳತಕ್ಕದ್ದು ಮತ್ತು ರಸ್ತೆಗಳ ಇಕ್ಕೆಲಗಳಲ್ಲಿ ಹಾಗೂ ಉದ್ಯಾನವನಗಳಲ್ಲಿ ಹೊಸ ಸಸಿಗಳನ್ನು ಬೆಳೆಸಲು ಸೂಕ್ತ ಕ್ರಮಕೈಗೊಳ್ಳಬೇಕು.

8. ಅನುಮೋದಿತ ವಿನ್ಯಾಸದಲ್ಲಿ ಮಳೆ ನೀರು ಕೊಯ್ಲಿಗಾಗಿ ಮತ್ತು ಅಂತರ್‌ಜಲವೃದ್ಧಿಗಾಗಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು.

9. ಅನುಮೋದಿತ ವಿನ್ಯಾಸದಲ್ಲಿರುವ ರಸ್ತೆಗಳು, ಉದ್ಯಾನವನವನ್ನು ಸಂಪೂರ್ಣವಾಗಿ ಅಭಿವೃದ್ಧಿಪಡಿಸಿ ಈ ಪ್ರಾಧಿಕಾರದಿಂದ ತಿಳಿಸುವವರೆಗೆ ನಿರ್ವಹಣೆಯನ್ನು ಮಾಡತಕ್ಕದ್ದು ಹಾಗೂ ಸಾರ್ವಜನಿಕ ಸೌಲಭ್ಯಕ್ಕೆ ಕಾಯ್ದಿರಿಸಿದ ನಿವೇಶನವನ್ನು ಒತ್ತುವರಿಯಾಗದಂತೆ ಸಂರಕ್ಷಿಸತಕ್ಕದ್ದು.

10. ವಿನ್ಯಾಸದಲ್ಲಿನ ರಸ್ತೆಗಳಿಂದ ಅಕ್ಕ-ಪಕ್ಕದ ಜಮೀನುಗಳಿಗೆ ಇರುವ ಸಂಪರ್ಕವನ್ನು ಯಾವುದೇ ಕಾರಣಕ್ಕೂ ನಿರ್ಬಂಧಿಸತಕ್ಕದ್ದಲ್ಲ.

11. ಈ ಅನುಮೋದನೆಯನ್ನು ಕೆ.ಟಿ.ಸಿ.ಪಿ (ತಿದ್ದುಪಡಿ) ಕಾಯ್ದೆ 2015ರ ಕಲಂ 17(2) ರಡಿಯಲ್ಲಿ ನೀಡಿರುವುದರಿಂದ, ಈ ಅನುಮೋದನೆಯನ್ನು ಜಮೀನಿನ ಮೇಲಿರುವ ಹಕ್ಕನ್ನು ಅಥವಾ ಮಾಲೀಕತ್ವವನ್ನು ನಿರೂಪಿಸುವ ಸಂಬಂಧ ಉಪಯೋಗಿಸಲು ಬರುವುದಿಲ್ಲ.

12. ಮೇಲಿನಂತೆ ನೀಡಲಾಗಿರುವ ಅನುಮತಿಗೆ ವ್ಯತಿರಿಕ್ತವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ವಿಧಿ 17 (4) ರಂತೆ ಕ್ರಮ ಜರುಗಿಸಲಾಗುವುದು.

13. ಜಮೀನಿಗೆ ಸಂಬಂಧಿಸಿದಂತೆ ಯಾವುದೇ ಸಿವಿಲ್ ವ್ಯಾಜ್ಯಗಳಿಗೆ ಈ ಪ್ರಾಧಿಕಾರವು ಜವಾಬ್ದಾರಿಯಾಗಿರುವುದಿಲ್ಲ.

14. ವಿನ್ಯಾಸ ಅಂಗೀಕಾರ ಕೋರಿಕೆ ಸಂಬಂಧ ಸಲ್ಲಿಸಲಾಗಿರುವ ದಾಖಲೆ ಅಥವಾ ಬೇರೆ ಯಾವುದೇ ಮಾಹಿತಿಗಳು ತಪ್ಪಾಗಿದ್ದಲ್ಲಿ, ಮೇಲ್ಕಂಡ ಯಾವುದೇ ಷರತ್ತುಗಳನ್ನು ಹಾಗೂ ಇತರೆ ಯಾವುದೇ ಇಲಾಖೆಗಳು ವಿಧಿಸುವ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಪ್ರಾಧಿಕಾರದಿಂದ ವಿನ್ಯಾಸಕ್ಕೆ ನೀಡಿರುವ ಅಂಗೀಕಾರವು ಯಾವುದೇ ಪೂರ್ವ ಸೂಚನೆಯು ಇಲ್ಲದೇ ತಂತಾನೇ ರದ್ದುಗೊಳ್ಳುತ್ತದೆ.

15. ನೈಸರ್ಗಿಕವಾಗಿ ಹರಿಯುವ ನದಿ/ಹಳ್ಳ/ಕೆರೆ/ನಾಲಾ ಮುಂತಾದವುಗಳಿಗೆ ವಿನ್ಯಾಸದ ಮಲೀನ ನೀರನ್ನು ಬಿಡಬಾರದು. ಗ್ರಾಮ ನಕ್ಷೆಯಂತೆ ಸೂಚಿಸಲಾದ ನಾಲಾ ಪ್ರದೇಶವನ್ನು ವಿನ್ಯಾಸ ನಕ್ಷೆಯಲ್ಲಿ ಸೂಚಿಸಿರುವಂತೆ ಸೂಕ್ತ ಡ್ರೈನೇಜ್ ನಿರ್ಮಿಸತಕ್ಕದ್ದು ಹಾಗೂ ನೀರಿನ ಹರಿವೆಗಾಗಿ ಯಾವುದೇ ಅಡಚಣೆ ಮಾಡತಕ್ಕದ್ದಲ್ಲ. ಹಾಗೂ ರಸ್ತೆ ಪರಿಚಲನೆಯಲ್ಲಿ ಹಾದು ಹೋಗುವ ನಾಲಾ ಪ್ರದೇಶಕ್ಕೆ ಸಕ್ಷಮ ಪ್ರಾಧಿಕಾರದಿಂದ ಪೂರ್ವಾನುಮತಿ ಪಡೆದು ಕಲ್ವರ್ಟ್ ಮತ್ತು ಡ್ರೈನೇಜ್ ನಿರ್ಮಿಸತಕ್ಕದ್ದು. ಹಾಗೂ ಯಾವುದೇ ಒತ್ತುವರಿ ಮಾಡತಕ್ಕದ್ದಲ್ಲ.

16. ಈ ಅನುಮೋದಿತ ವಸತಿ ವಿನ್ಯಾಸ ನಕ್ಷೆ ಪ್ರದೇಶದಲ್ಲಿ ಬರುವ 'ಬಿ' ಖರಾಬು ಜಮೀನುಗಳು ಸರ್ಕಾರಕ್ಕೆ ಸೇರಿರುತ್ತದೆ. ಈ ಜಮೀನುಗಳನ್ನು ಯಥಾಸ್ಥಿತಿಯಂತೆ ಕಾಪಾಡತಕ್ಕದ್ದು ಹಾಗೂ ಅತಿಕ್ರಮಣ ಮಾಡಬಾರದು ಮತ್ತು ಇತರೆ ಉದ್ದೇಶಗಳಿಗಾಗಿ ಉಪಯೋಗಿಸತಕ್ಕದ್ದಲ್ಲ.

17. ಸ್ಥಳೀಯ ಸಂಸ್ಥೆಗಳು ವಿಧಿಸುವ ಷರತ್ತುಗಳನ್ನು ಪಾಲಿಸತಕ್ಕದ್ದು.

18. ಆರ್ಥಿಕವಾಗಿರುವ ದುರ್ಬಲರಾಗಿರುವ ಮತ್ತು ಕಡಿಮೆ ಆದಾಯದ ವರ್ಗದವರಿಗೆ ನಿವೇಶನ ಹಾಗೂ ಮನೆಗಳನ್ನು ಮೀಸಲಿಡುವ ಕುರಿತು ದಾಖಲಾಗಿರುವ ರಿಟ್ ಪಿಟಿಷನ್ ಸಂಖ್ಯೆ 9800/2015 (LB-RES) ಗೆ ಸಂಬಂಧಿಸಿದಂತೆ ನ್ಯಾಯಾಲಯವು ಹೊರಡಿಸುವ ಅಂತಿಮ ತೀರ್ಪಿಗೆ ಬದ್ಧರಾಗಿರತಕ್ಕದ್ದು.

19. ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಪ್ರಾಧಿಕಾರವು ನೀಡಿರುವ ಅನುಮೋದನೆಯು ಯಾವ ಪೂರ್ವ ಸೂಚನೆಯೂ ಇಲ್ಲದೆ ಕೂಡಲೇ ರದ್ದಾಗುವುದು ಹಾಗೂ ಕೆಟಿಸಿಪಿ (ತಿದ್ದುಪಡಿ) ಕಾಯ್ದೆ 1961 ರಡಿಯಲ್ಲಿ ಸೂಕ್ತ ಕ್ರಮ ಜರುಗಿಸಲಾಗುವುದು.

ಅರ್ಜಿದಾರರು ವಿನ್ಯಾಸದಲ್ಲಿನ ಕಾಮಗಾರಿಗಳನ್ನು ಅಭಿವೃದ್ಧಿಪಡಿಸಿ ವಿನ್ಯಾಸದಲ್ಲಿನ ಉದ್ಯಾನವನ/ಬಯಲು ಪ್ರದೇಶ ಹಾಗೂ ರಸ್ತೆಗಳನ್ನು ಸಂಬಂಧಿಸಿದ ಸ್ಥಳೀಯ ಸಂಸ್ಥೆಗೆ ನೋಂದಾಯಿತ ಪರಿತ್ಯಜನಾ ಪತ್ರದ ಮುಖಾಂತರ ಹಸ್ತಾಂತರಿಸಿ,

☎ Ph : 2768 3377

**ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ, ದೇವನಹಳ್ಳಿ**

ನಂ. 333/1, ಮೊದಲನೇ ಮಹಡಿ, ವಿ.ಜೆ. ಕಾಂಪ್ಲೆಕ್ಸ್, ಶಾಂತಿನಗರ, ಸೂಲಿಬೆಲೆ ರಸ್ತೆ, ದೇವನಹಳ್ಳಿ ಟೌನ್, ಬೆಂಗಳೂರು ಗ್ರಾಮಾಂತರ ಜಿಲ್ಲೆ-562 110.

ಇಮೇಲ್ : biaapa.devanahalli@gmail.com ವೆಬ್‌ಸೈಟ್ : www.biaapa.in

ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ವಿವಿಧ ಇಲಾಖೆಗಳಿಂದ ಅಂದರೆ ರಸ್ತೆ ಮತ್ತು ಮಳೆ ನೀರು ಚರಂಡಿ, ಒಳಚರಂಡಿ ಅಭಿವೃದ್ಧಿಪಡಿಸಿರುವ ಬಗ್ಗೆ ಲೋಕೋಪಯೋಗಿ ಇಲಾಖೆಯಿಂದ, ವಿದ್ಯುತ್ ಸರಬರಾಜು ಮಾಡಿರುವ ಬಗ್ಗೆ ಬೆಸ್ಕಾಂನಿಂದ, ಉದ್ಯಾನವನ ಅಭಿವೃದ್ಧಿಪಡಿಸಿರುವ ಬಗ್ಗೆ ತೋಟಗಾರಿಕೆ ಇಲಾಖೆಯಿಂದ, ನೀರು ಸರಬರಾಜು ಮತ್ತು ಒಳಚರಂಡಿ ಕಾಮಗಾರಿ ಬಗ್ಗೆ ಸಕ್ಷಮ ಪ್ರಾಧಿಕಾರದಿಂದ ಹಾಗೂ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಿರುವ ಬಗ್ಗೆ ಸ್ಥಳೀಯ ಸಂಸ್ಥೆಯಿಂದ ಪ್ರಮಾಣ ಪತ್ರ ಹಾಗೂ ವಿನ್ಯಾಸದಲ್ಲಿ ಮೂಲಭೂತ ಸೌಲಭ್ಯಗಳು ಮತ್ತು ಸಾರ್ವಜನಿಕ ಪ್ರದೇಶಗಳ ನಿರ್ವಹಣೆ ಬಗ್ಗೆ ಸ್ಥಳೀಯ ಸಂಸ್ಥೆಯಿಂದ ಕಾಮಗಾರಿ ಮುಕ್ತಾಯ ಪತ್ರವನ್ನು ಪಡೆದು ಸಲ್ಲಿಸಿ, ವಿನ್ಯಾಸ ನಕ್ಷೆಗೆ ಅಂತಿಮ ಅನುಮೋದನೆ ಹಾಗೂ ನಿವೇಶನ ಬಿಡುಗಡೆಗೆ ಮನವಿ ಸಲ್ಲಿಸತಕ್ಕದ್ದು.

ಸಹಿ/-

ನಗರ ಮತ್ತು ಗ್ರಾಮಾಂತರ ಯೋಜನಾ
ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ,
ಬೆಂಗಳೂರು ಅಂತರ ರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ

ಇವರಿಗೆ:

ಶ್ರೀ ಎಂ.ವಿ.ಸೂರ್ಯನಾರಾಯಣ ರೆಡ್ಡಿ ಬಿನ್
ಲೇ॥ ವೆಂಕಟರೆಡ್ಡಿ ಮತ್ತು ಶ್ರೀ ಗೋಪಿನಾಥ್.ಎಲ್
ಬಿನ್ ಲೇ॥ ಲಕ್ಷ್ಮೀನಾರಾಯಣಪ್ಪ ರವರುಗಳ
ಪರವಾಗಿ ನೋಂದಾಯಿತ ಜಿಪಿಎದಾರರಾದ
ಶ್ರೀ ಶ್ರೀನಿವಾಸ.ವಿ. ಬಿನ್ ವೆಂಕಟರಮಣಪ್ಪ,
ನಂ. 53, ವಿ.ನಾರಾಯಣಪುರ,
ದೂರವಾಣಿನಗರ, ಬೆಂಗಳೂರು- 16.

ಪ್ರತಿಯನ್ನು:

1) ಭೂ ದಾಖಲೆಗಳ ಸಹಾಯಕ ನಿರ್ದೇಶಕರು, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಇವರಿಗೆ ತಾತ್ಕಾಲಿಕ ಅನುಮೋದಿತ ವಸತಿ ವಿನ್ಯಾಸ ನಕ್ಷೆಯ ಪ್ರತಿಯನ್ನು ಕಳುಹಿಸಿದ್ದು, ದೃಢೀಕೃತ ಸರ್ವೆ ನಕ್ಷೆಯನ್ವಯ ವಸತಿ ವಿನ್ಯಾಸ ನಕ್ಷೆಗೆ ತಾತ್ಕಾಲಿಕ ಅನುಮೋದನೆಗಾಗಿ ಪರಿಗಣಿಸಲಾಗಿದ್ದು, ದೃಢೀಕೃತ ಸರ್ವೆ ನಕ್ಷೆಯಂತೆ ಅನುಗುಣವಾಗಿ ಇಲ್ಲದಿದ್ದಲ್ಲಿ ಅಥವಾ ಯಾವುದೇ ಸರ್ಕಾರಿ ಜಮೀನು ಒಳಗೊಂಡಿದ್ದಲ್ಲಿ ಈ ಪ್ರಾಧಿಕಾರಕ್ಕೆ ಮಾಹಿತಿ ನೀಡಲು ಹಾಗೂ ತಾತ್ಕಾಲಿಕ ಅನುಮೋದನೆ ನೀಡಲಾದ ವಸತಿ ವಿನ್ಯಾಸದಂತೆ ಯಾವುದೇ ಕೆರೆ / ಖರಾಬು ಒತ್ತುವರಿ ಆಗಿಲ್ಲದೇ ಇರುವ ಬಗ್ಗೆ ಮಾಹಿತಿ ನೀಡಲು ಕೋರಿದೆ. ತಮ್ಮ ವತಿಯಿಂದ ಯಾವುದೇ ಮಾಹಿತಿ ಸ್ವೀಕೃತಗೊಂಡಿಲ್ಲದ ಪಕ್ಷದಲ್ಲಿ ದಾಖಲೆಯಂತೆ ವಸತಿ ವಿನ್ಯಾಸ ಅನುಮೋದನೆಯು ಸರಿಯಾಗಿರುತ್ತದೆ ಎಂದು ತಿಳಿದು ಮುಂದಿನ ಕ್ರಮಕೈಗೊಳ್ಳಲಾಗುವುದೆಂಬ ಅಂಶವನ್ನು ತಮ್ಮ ಗಮನಕ್ಕೆ ತರಲಾಗಿದೆ.

2) ಮುಖ್ಯಾಧಿಕಾರಿಗಳು, ವಿಜಯಪುರ ಪುರಸಭೆ ಇವರಿಗೆ ಕಳುಹಿಸುತ್ತಾ ಸದರಿ ವಿನ್ಯಾಸಕ್ಕೆ ತಾತ್ಕಾಲಿಕ ಅನುಮೋದನೆ ಮಾತ್ರ ನೀಡಲಾಗಿದ್ದು, ಪ್ರಸ್ತಿತ ವಿನ್ಯಾಸಕ್ಕೆ ಅಂತಿಮ ಅನುಮೋದನೆ ನೀಡಿ ನಿವೇಶನಗಳನ್ನು ಬಿಡುಗಡೆಗೊಳಿಸುವವರೆಗೂ ಯಾವುದೇ ನಿವೇಶನಗಳಿಗೆ ಖಾತಾ ನೊಂದಣಿ ಮಾಡಬಾರದೆಂದು ಈ ಮೂಲಕ ಸೂಚಿಸಲಾಗಿದೆ.

3) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ದೇವನಹಳ್ಳಿ ಉಪವಿಭಾಗ, ದೇವನಹಳ್ಳಿ ಇವರಿಗೆ ಅನುಮೋದನೆ ನಕ್ಷೆಯ ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.

4) ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ದೇವನಹಳ್ಳಿ ಉಪವಿಭಾಗ, ದೇವನಹಳ್ಳಿ ಇವರಿಗೆ ಅನುಮೋದನೆ ನಕ್ಷೆಯ ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.

5) ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು, ಜಿಲ್ಲಾ ಪಂಚಾಯತ್, ದೇವನಹಳ್ಳಿ ಇವರಿಗೆ ಅನುಮೋದನೆ ನಕ್ಷೆಯ ಪ್ರತಿಯನ್ನು ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.

6) ಕಛೇರಿ ಪ್ರತಿ.

11.03.2019

ನಗರ ಮತ್ತು ಗ್ರಾಮಾಂತರ ಯೋಜನಾ
ಜಂಟಿ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ,
ಬೆಂಗಳೂರು ಅಂತರ ರಾಷ್ಟ್ರೀಯ ವಿಮಾನ
ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರ,
ದೇವನಹಳ್ಳಿ